ಅಂಗನವಾಡಿ ಕಾರ್ಯಕರ್ತೆಯರಿಗೆ ಗೌರವ ಧನವನ್ನು ಸಕಾಲದಲ್ಲಿ ಪಾವತಿಸುವ ಬಗ್ಗೆ.

146 (768) ಶ್ರೀ ಕೆ. ಪದ್ಮನಾಭ ಕೊಟ್ಟಾರಿ (ವಿಟ್ಲ): ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ. ಅಂಗನವಾಡಿ ಕಾರ್ಯಕರ್ತೆಯರಿಗೆ ನೀಡಲಾಗುತ್ತಿರುವ ಗೌರವಧನವನ್ನು ಪ್ರತಿ ತಿಂಗಳೂ ನಿಗದಿತ ಸಮಯಕ್ಕೆ ಪಾವತಿಸಲಾಗುತ್ತಿದೆಯೇ;

ಆ. ದಕ್ಷಿಣ ಕನ್ನಡ ಜಿಲ್ಲೆಯ ಯಾವ ತಾಲ್ಲೂಕುಗಳಿಗೆ ಕ್ಲುಪ್ತಕಾಲದಲ್ಲಿ ಗೌರವಧನ ಪಾವತಿಯಾಗುತ್ತಿಲ್ಲ ಹಾಗೂ ಅದಕ್ಕೆ ಕಾರಣಗಳೇನು?

ಶ್ರೀ ಹೆಚ್.ಕೆ.ಕುಮಾರಸ್ವಾಮಿ (ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು):

ಅ. ಅಂಗನವಾಡಿ ಕಾರ್ಯಕರ್ತೆಯರಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಗೌರವಧನ ನೀಡುತ್ತಿದ್ದು, ಕೇಂದ್ರ ಸರ್ಕಾರದಿಂದ ಆಯವ್ಯಯ ಬಿಡುಗಡೆಯಾಗುವುದು ವಿಳಂಬವಾದ ಕಾರಣ ಈ ಗೌರವಧನ ವಿಳಂಬವಾಗಿ ಪಾವತಿಸಲಾಗಿದೆ. ರಾಜ್ಯ ಸರ್ಕಾರದಿಂದ ನೀಡುವ ಗೌರವಧನವನ್ನು ನಿಯಮಿತವಾಗಿ ನೀಡಲಾಗುತ್ತಿದೆ.

ಆ. ದಕ್ಷಿಣ ಕನ್ನಡ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಿಗೂ ಕ್ಲುಪ್ತ ಕಾಲದಲ್ಲಿ ಕೇಂದ್ರ ಸರ್ಕಾರದಿಂದ ನೀಡುವ ಗೌರವಧನ ಪಾವತಿಯಾಗಿರುವುದಿಲ್ಲ. ಇತ್ತೀಚೆಗೆ ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾಗಿದ್ದು ಪೂರ್ಣ ಪ್ರಮಾಣದ ಗೌರವಧನವನ್ನು ಬೇಗ ಪಾವತಿಸಲಾಗುವುದು. ರಾಜ್ಯ ಸರ್ಕಾರದಿಂದ ನೀಡುವ ಗೌರವಧನವನ್ನು ನಿಯಮತಿವಾಗಿ ನೀಡಲಾಗುತ್ತಿದೆ.

ಶ್ರೀ ಕೆ. ಪದ್ಮನಾಭ ಕೊಟ್ಟಾರಿ: ಮಾನ್ಯ ಅಧ್ಯಕ್ಷರೆ ನಾನು ಕೇಳಿದ (ಅ) ಪ್ರಶ್ನೆಗೆ ಅವರು ಉತ್ತರಿಸಿದ್ದಾರೆ. ಮತ್ತೆ ನಾನು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಯಾವ್ಯಾವ ತಾಲ್ಲೂಕುಗಳಲ್ಲಿ ಕ್ಲುಪ್ತ ಕಾಲದಲ್ಲಿ ಗೌರವ ಧನವನ್ನು ಪಾವತಿಸಲಾಗುತ್ತಿದೆ ಎಂದು ಕೇಳಿದ್ದೇನೆ. ಅದಕ್ಕೆ ಅವರು ನಾನು ಕೇಳಿರುವ (ಆ) ಪ್ರಶ್ನೆಯಲ್ಲಿ ಉತ್ತರ ನೀಡಿರುತ್ತಾರೆ. ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿನಲ್ಲಿ ಕಳೆದ ಜನವರಿ ತಿಂಗಳಿನಿಂದ ಅಂಗನವಾಡಿ ಕಾರ್ಯಕರ್ತೆಯರಿಗೆ ಗೌರವ ಧನ ಸಿಕ್ಕಲಿಲ್ಲ. March ತಿಂಗಳಲ್ಲಿ ಆ ಅಂಗನವಾಡಿ ಕಾರ್ಯಕರ್ತೆಯರು ತಾಲ್ಲೂಕು ಕೇಂದ್ರದಲ್ಲಿ ಬಂದು ಧರಣಿ ಮಾಡುವಂಥ ಪರಿಸ್ಥಿತಿ ನಿರ್ಮಾಣವಾಗಿದೆ. ಕೇಂದ್ರ ಸರ್ಕಾರ ಮತ್ತು ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ ನಡೆಯುವಂಥ ಈ ಒಂದು ಯೋಜನೆಯಲ್ಲಿ ಅಂಗನವಾಡಿ ಕಾರ್ಯಕರ್ತೆಯರಿಗೆ ಗೌರವ ಧನ ಕೊಡುವುದು ನಡೆಯುತ್ತಿದೆ. ಸಾಮಾನ್ಯ ಕನಿಷ್ಠ ವೇತನ. ಗೌರವ ಧನ ಅವರಿಗೆ ಸಿಗುತ್ತಿರುವಂಥದ್ದು. ಅಂಥ ಅಂಗನವಾಡಿ ಕಾರ್ಯಕರ್ತೆಯರಿಗೆ ಪ್ರತಿ ತಿಂಗಳು ಸಕಾಲದಲ್ಲಿ ಗೌರವ ಧನ ನೀಡುವ ಬಗ್ಗೆ ....

ಅಧ್ಯಕ್ಷರು: ಪ್ರಶ್ನೆ ಕೇಳಿ.

ಶ್ರೀ ಕೆ. ಪದ್ಮನಾಭ ಕೊಟ್ಟಾರಿ: ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದ್ದಾರೆ. ಏಕೆ ಎಂಬುದರ ಬಗ್ಗೆ ಸರ್ಕಾರ ಸ್ಪಷ್ಟವಾದ ಉತ್ತರ ನೀಡಬೇಕಾಗಿದೆ.

ಶ್ರೀ ಹೆಚ್.ಕೆ.ಕುಮಾರಸ್ವಾಮಿ: ಮಾನ್ಯ ಸದಸ್ಯರೇ ಹೇಳಿದಂತೆ, ಅಂಗನವಾಡಿ ಕಾರ್ಯಕರ್ತೆಯರಿಗೆ ನಾವು ಕೊಡುತ್ತಿರುವಂಥ ಗೌರವ ಧನವನ್ನು ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರ ಎರಡೂ ಕೂಡ ಕೂಡ ಭರಿಸುತ್ತಿವೆ. ಈಗಾಗಲೇ ನಾವು ರಾಜ್ಯ ಸರ್ಕಾರದಿಂದ ಯಾವುದೇ ತಡೆ ಇಲ್ಲದ ರೀತಿಯಲ್ಲಿ ನಾವೇನು 550 ರೂಪಾಯಿಗಳನ್ನು ಕೊಡುತ್ತೇವೆ ಅದನ್ನು ಈಗ ಕೊಡುತ್ತಿದ್ದೇವೆ. ಅದರಲ್ಲಿ ಯಾವುದೇ ತಡೆ ಆಗಿಲ್ಲ. ಕೇಂದ್ರ ಸರ್ಕಾರದಿಂದ ಹಣ ಬಂದಿರಲಿಲ್ಲ. April ತಿಂಗಳು ಮತ್ತು May ತಿಂಗಳಿನಲ್ಲಿ ಹಣ 2 ಕಂತುಗಳಲ್ಲಿ ಬಂದಿದೆ. ಅದನ್ನು ನಾವು ಈಗಾಗಲೇ ವಿತರಿಸಿದ್ದೇವೆ. ಕಡ್ಡಾಯವಾಗಿ ವಿತರಿಸುವಂಥ ವ್ಯವಸ್ಥೆಯನ್ನು ಮಾಡುತ್ತೇವೆ.

ಶ್ರೀ ಕೆ. ಪದ್ಮನಾಭ ಕೊಟ್ಟಾರಿ: ಕೇಂದ್ರ ಮತ್ತು ರಾಜ್ಯ ಸರ್ಕಾರದ ಪಾಲುದಾರಿಕೆಯಲ್ಲಿ ನಡೆಯುವಂಥ ಈ ಯೋಜನೆ ಇದ್ದು, ಇದಕ್ಕೆ ರಾಜ್ಯ ಸರ್ಕಾರವಾದರೂ ಕೂಡ ಆ ನೌಕರರಿಗೆ ಕ್ಲುಪ್ತ ಸಮಯಕ್ಕೆ ಪ್ರತಿ ತಿಂಗಳೂ ಕೊಡುವಂಥ 1550 ರೂಪಾಯಿ ಕೊಡುವುದನ್ನು ನಾವೇಕೆ ಈ ರೀತಿಯಲ್ಲಿ ನಿರ್ಲಕ್ಷ್ಯ ಮಾಡುತ್ತಿದ್ದೇವೆ? ಏಕೆ ಕೊಡಲಿಕ್ಕಾಗುವುದಿಲ್ಲವೆಂಬ ಬಗ್ಗೆ ಸರ್ಕಾರ ಸ್ಪಷ್ಟ ಉತ್ತರ ಕೊಡಬೇಕೆಂದು ಕೇಳುತ್ತಿದ್ದೇನೆ.

ಶ್ರೀ ಹೆಚ್.ಕೆ.ಕುಮಾರಸ್ವಾಮಿ: ರಾಜ್ಯ ಸರ್ಕಾರದ ನಿರ್ಲಕ್ಷ್ಯದ ಪ್ರಶ್ನೆಯೇ ಇಲ್ಲ. ನಾವು 550 ರೂಪಾಯಿ ಕೊಡುತ್ತಿದ್ದೇವೆ. ಕೇಂದ್ರ ಸರ್ಕಾರದಿಂದ ವಿಳಂಬವಾಗಿತ್ತು. ಈಗ ಬಂದಿದೆ. ವಿತರಿಸುತ್ತಿದ್ದೇವೆ.

ಶ್ರೀ ಕೆ. ಪದ್ಮನಾಭ ಕೊಟ್ಟಾರಿ: ಅನೇಕ ಯೋಜನೆಗಳಲ್ಲಿ ಕೇಂದ್ರ ಸರ್ಕಾರದಿಂದ ರಾಜ್ಯ ಸರ್ಕಾರಕ್ಕೆ ಬಂದ ಮೇಲೆಯೇ ಕಾರ್ಯಕ್ರಮವಾಗುವುದಲ್ಲ. ಕಾರ್ಯಕ್ರಮವಾಗುತ್ತದೆ. ನೌಕರರಿಗೆ ಸಂಬಳ ಪಾವತಿಯಾಗುತ್ತದೆ. ಕೇಂದ್ರ ಸರ್ಕಾರದಿಂದ ಮತ್ತೆ ಅದಕ್ಕೆ ಜಮೆಯಾಗುತ್ತದೆ.

ಶ್ರೀ ಹೆಚ್.ಕೆ.ಕುಮಾರಸ್ವಾಮಿ: ಅವರ ಸಲಹೆ-ಸೂಚನೆಯನ್ನು ಗಮನಿಸುತ್ತೇನೆ.

ಅಧ್ಯಕ್ಷರು: ಹೆಚ್.ಎಸ್. ಶಂಕರಲಿಂಗೇಗೌಡರು ಇಲ್ಲವೇ?

ಶ್ರೀ ವಾಟಾಳ್ ನಾಗರಾಜ್: ಅಧ್ಯಕ್ಷರು ಏನು ತಿಳಿದುಕೊಂಡಿದ್ದಾರೆಂದರೆ, ಅವರು ಮಂತ್ರಿ ಸ್ಥಾನ ಸಿಗಲಿಲ್ಲ ಎಂದು ಹೊರಟು ಹೋಗಿದ್ದಾರೆ ಸದನಕ್ಕೆ ಬರಲಿಲ್ಲವೆಂದು ತಿಳಿದುಕೊಂಡಿದ್ದಾರೆ.

ಮೈಸೂರು ನಗರಕ್ಕೆ ಹೊಸದಾಗಿ ಕುಡಿಯುವ ನೀರಿನ ಯೋಜನೆಗಳು

147 (670) ಶ್ರೀ ಶಂಕರಲಿಂಗೇಗೌಡ ಹೆಚ್.ಎಸ್.(ಚಾಮರಾಜ): ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೇ?

ಅ) ಮೈಸೂರು ನಗರಕ್ಕೆ ಹೊಸದಾಗಿ ಮಂಜೂರು ಮಾಡುವಂತೆ ಯಾವ ಯಾವ ಕುಡಿಯುವ ನೀರಿಗೆ ಯೋಜನೆಗಾಗಿ ಪ್ರಸ್ತಾವನೆ ಸಲ್ಲಿಸಲಾಗಿದೆ;

ಆ) ಈ ಪ್ರಸ್ತಾವನೆ ಸಲ್ಲಿಸಿದ್ದು ಯಾವಾಗ; ಈ ಪ್ರಸ್ತಾವನೆ ಈಗ ಯಾವ ಹಂತದಲ್ಲಿದೆ (ಈ ಪ್ರಸ್ತಾವನೆಗಳ ಯೋಜನಾ ವೆಚ್ಚದ ಸಂಪೂರ್ಣ ವಿವರ ನೀಡುವುದು);

ಇ) ಈ ಪ್ರಸ್ತಾವನೆಗಳಿಗೆ ಸರ್ಕಾರ ಅನುಮತಿ ನೀಡುವುದು ಯಾವಾಗ; ಈ ಯೋಜನೆಗಳು ಅನುಷ್ಠಾನಗೊಂಡಲ್ಲಿ ಮೈಸೂರು ನಗರಕ್ಕೆ ಎಷ್ಟು ಎಂ.ಜಿ.ಡಿ. ನೀರು ದೊರಕುವುದು;